1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರಃ1829/2015

ಚಾಸಾಃ1 ಪ್ರಾಸಾಃ5

ದಿನಾಂಕಃ 07.08.2026

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ದಾಸ ಖಾರ್ವಿ |
| ತಂದೆಯ ಹೆಸರು | : | ಚಂದ್ರಕಾಂತ |
| ವಯಸ್ಸು | : | 70 ವರ್ಷ |
| ಉದ್ಯೋಗ | : | ಮನೆಯಲ್ಲಿ ಇರುವುದು |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸ.ಸ.ಅ.ರವರಿಂದಃ**

ಚಾಸಾ-2 ನನ್ನ ಪತ್ನಿ, ಚಾಸಾ-3 ನನ್ನ ಮಗ, ಆರೋಪಿತರ ಪರಿಚಯವಿದೆ. ಆರೋಪಿಗಳು ನನಗೆ ಕೋಲಿನಿಂದ ಹಲ್ಲೆ ಮಾಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರನ್ನು ಮಾಡಿರುವುದಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ಕೋಲನ್ನು ವಶಕ್ಕೆ ಪಡೆದಿರುವುದಿಲ್ಲ.

ಈಗ ಸಾಕ್ಷಿಗೆ ಮುಮಾ1ನ್ನು ತೋರಿಸಲಾಗಿ ನೋಡಿ ಗುರುತಿಸಿರುವುದಿಲ್ಲ.

ಈಗ ಸಾಕ್ಷಿಗೆ ನಿಪಿ-2 ಮತ್ತು 4ನ್ನು ತೋರಿಸಲಾಗಿದ್ದು ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಮತ್ತು ನಿಪಿ-4(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ**

ದಿಃ 29-03-2015 ರಂದು ಸುಮಾರು 12 ಗಂಟೆ ಸಮಯಕ್ಕೆ ನಿಮ್ಮ ಅಜ್ಜಿಗೆ ಸಂಬಂಧಿಸಿದ ತೆಂಗಿನ ತೋಟಕ್ಕೆ ತೆಂಗಿನ ಕಾಯಿ ತೆಗೆಯಲು ಹೋದಾಗ ಅಲ್ಲಿಗೆ ಆರೋಪಿಗಳು ಬಂದು ಅದರಲ್ಲಿ 1ನೇ ಆರೋಪಿಯು ನಿಮ್ಮನ್ನು ಉದ್ದೇಶಿಸಿ ನೀವು ತೆಂಗಿನ ಕಾಯಿ ತೆಗೆಯುವುದು ಬೇಡ ಹೋಗು ಎಂದು ಹೇಳಿದರು ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನೀವು ಇದು ನಮ್ಮ ಜಾಗ ನಾವು ನಮ್ಮ ತೆಂಗಿನ ಮರದ ಕಾಯಿಯನ್ನು ತೆಗೆಯುತ್ತೇನೆ ಎಂದು ಹೇಳಿದಾಗ 1ನೇ ಆರೋಪಿ ತನ್ನ ಕೈಯಲ್ಲಿ ಇದ್ದ ಕೊಡಲಿಯಿಂದ ನಿಮಗೆ ಹೊಡೆಯಲು ಬಂದಾಗ ನೀವು

ತಪ್ಪಿಸಿಕೊಂಡಿರುತ್ತೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಪುನಃ ನಿಮಗೆ ಹೊಡೆದಾಗ ಕೊಡಲಿಯು ಎಡಕಣ್ಣಿನ ಹುಬ್ಬಿನ ಮೇಲ್ಭಾಗಕ್ಕೆ ತಾಗಿ ರಕ್ತಗಾಯವಾಗಿರುತ್ತದೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. 2 ಮತ್ತು 3ನೇ ಆರೋಪಿತರು ನಿಮಗೆ ನಿಮ್ಮ ಕೈ, ಹೊಟ್ಟೆಗೆ ಮತ್ತು ಬೆನ್ನಿಗೆ ಕೋಲಿನಿಂದ ಹೊಡೆದು ನೋವು ಉಂಟು ಮಾಡಿರುತ್ತಾರೆ ಎಂದರೆ  ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಆ ವೇಳೆಗೆ ಚಾಸಾ-3 ರವರು ಬರುವುದನ್ನು ನೋಡಿ ಆರೋಪಿಗಳು ಅಲ್ಲಿಂದ ಹೋಗಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

ನಂತರ ಚಾಸಾ-3 ರವರು ನಿಮಗೆ ಆದ ಗಾಯಕ್ಕೆ ಚಿಕಿತ್ಸೆ ಕೊಡಿಸಲು ಕುಂದಾಪುರ ಸರಕಾರಿ ಆಸ್ಪತ್ರೆಗೆ ಕರೆ ತಂದಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನೀವು ಚಿಕಿತ್ಸೆ ದಾಖಲಾಗಿದ್ದಾಗ  ಪೊಲೀಸರಿಗೆ ಹೇಳಿಕೆಯ ದೂರನ್ನು ನೀಡಿರುತ್ತೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

ದಿಃ 02-04-2015 ರಂದು  ನೀವು ತೋರಿಸಿದ ಕೃತ್ಯ ಸ್ಥಳದಲ್ಲಿ ಚಾಸಾ4 ರವರ ಸಮಕ್ಷಮ ಪಂಚನಾಮೆಯನ್ನು ಜರುಗಿಸಿ ಒಂದು ಕೋಲನ್ನು ಜಪ್ತಿಪಡಿಸಿಕೊಂಡು 4-15 ರಿಂದ 5 ಗಂಟೆಯವರೆಗೆ ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನಿಮ್ಮ ವಿರುದ್ದ ಆರೋಪಿಗಳು ಪ್ರತಿ ದೂರನ್ನು ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಈ ಪ್ರಕರಣದ ಬಗ್ಗೆ ನಿಮಗೆ ಎಲ್ಲಾ ಮಾಹಿತಿ ಇದ್ದರೂ ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**(ಶ್ರೀನಿವಾಸ ಕೆ.ಆರ್)**
**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**